ಆ ಸಮಿತಿಯು ವರದಿಯನ್ನು ಈ ಸಭೆಯ ಮುಂದೆ ಇಡಬೇಕೆಂದು ನಾನು ಆದೇಶ ಕೊಡುತ್ತಿದ್ದೇನೆ. ಒಂದು ತಿಂಗಳ ಮಿತಿಯನ್ನು ನಾನು ನಿಗದಿ ಮಾಡಿದ್ದೇನೆ.

ಶ್ರೀ ಎಂ.ಮಲ್ಲಿಕಾರ್ಜುನ ಖರ್ಗೆ: ಇದನ್ನು ತಾವು ಎಸ್ಟಿಮೇಟ್ ಕಮಿಟಿ ಮುಂದೆ ಇಡಬೇಕು. ಇದು ಸಬ್ಜೆಕ್ಟ್ ಕಮಿಟಿ ಮುಂದೆ ಬರುವುದಿಲ್ಲ.

ಶ್ರೀ ಹೆಚ್.ಡಿ. ದೇವೇಗೌಡ: ಎಸ್ಟಿಮೇಟ್ ಕಮಿಟಿಗೆ ಹಾಕಿ ನಾನು ಅದಕ್ಕೆ ಒಪ್ಪಿಕೊಳ್ಳುತ್ತೇನೆ. I accept. I have no objection even to refer to the Estimate Committe-

ಎನೋ ವೇರಿಯೇಷನ್ ಆಗಿದೆ ಎಂದೆಲ್ಲಾ ಹೇಳುತ್ತಿದ್ದಾರೆ, ಆ ಕಮಿಟಿಗೆ ಹಾಕಿ. Mr. Speaker you have been a Minister, you have been the Leader of the Opposition for such along time? How does it make any difference?

ಶ್ರೀ.ಎಂ.ಮಲ್ಲಿಕಾರ್ಜುನ ಖರ್ಗೆ: ಸಬ್ಜೆಕ್ಟ್ ಕಮಿಟಿಯವರು ಆಯವ್ಯಯದ ಬಗ್ಗೆ ಚರ್ಚೆ ಮಾಡುತ್ತಾರೆ. ಪಿ.ಎ.ಸಿ. ಅಥವಾ ಎಸ್ಟಿಮೇಟ್ ಕಮಿಟಿಯ ಸಿಟಿಂಗ್ಸ್ ಹೆಚ್ಚಾಗಿರುವುದರಿಂದ ಈ ಎರಡು ಕಮಿಟಿಗಳಲ್ಲಿ ಯಾವುದಕ್ಕಾದರೂ ಹಾಕಿ. ಒಂದು ತಿಂಗಳಲ್ಲಿ ವರದಿಯನ್ನು ಸಲ್ಲಿಸಬೇಕು ಎಂದು ತಾವು ಈಗಾಗಲೇ ಹೇಳಿದ್ದೀರಿ.

ಅಧ್ಯಕ್ಷರು: ಇದು ಎಸ್ಟಿಮೇಟ್ ಕಮಿಟಿ ವ್ಯಾಪ್ತಿಗೆ ಬರುವುದರಿಂದ ನಾನು ಈ ವಿಷಯವನ್ನು ಎಸ್ಟಿಮೇಟ್ ಕಮಿಟಿಗೆ ಹಾಕುತ್ತಿದ್ದೇನೆ. ಆ ಸಮಿತಿಯವರು ಒಂದು ತಿಂಗಳಲ್ಲಿ ಇದರ ಬಗ್ಗೆ ವರದಿಯನ್ನು ಸದನಕ್ಕೆ ಸಲ್ಲಿಸಬೇಕು. 1995ನೇ ಮಾರ್ಚ್ 20ರಂದು ವಿಧಾನ ಮಂಡಲದ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಸಭೆಯ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸುತ್ತೇವೆ.

(ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು)

ರಾಜ್ಯಪಾಲರ ಭಾಷಣಕ್ಕೆ ಸದನವು ಅಂಗೀಕರಿಸಿದ ವಿಷಯದ ನಿರ್ಣಯವನ್ನು ಸನ್ಮಾನ್ಯ ರಾಜ್ಯಪಾಲರಿಗೆ ಕಳುಹಿಸಿಕೊಡಲಾಗುವುದು.

ಪ್ರಕಟಣೆ

ಮಾನ್ಯ ಉಪ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 114ರ ಮೇರೆಗೆ ದಿನಾಂಕ 10ನೇ ಏಪ್ರಿಲ್, 1995 ರಂದು "1995ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿವೇದನಗಳು ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕ" ವನ್ನು ಯಾವುದೇ ತಿದ್ದುಪಡಿಯಿಲ್ಲದೆ ಅನುಮೋದಿಸಿತೆಂದು ಈ ಮೂಲಕ ತಿಳಿಸುತ್ತಿದ್ದೇನೆ.

ಶಾಸನ ರಚನೆ

1. ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿದೇಯಕ 1995 ಮಂಡನೆಗೆ ಅನುಮತಿ ಕೋರಿಕೆ

ಶ್ರೀ. ಹೆಚ್.ಡಿ.ದೇವೇಗೌಡ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1995ರ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾಪ ಏನೆಂದರೆ;

''1995ರ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿಯನ್ನು ನೀಡಲಾಯಿತು.

ಶ್ರೀ. ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1995ರ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.(ಅನುಬಂಧ I)

2. ಕರ್ನಾಟಕ ಸ್ಟ್ಯಾಂಪುಗಳ (ಎರಡನೇ ತಿದ್ದುಪಡಿ) ವಿಧೇಯಕ, 1995 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಆರ್.ಎಲ್.ಜಾಲಪ್ಪ (ಕಂದಾಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ 1995ರ ಕರ್ನಾಟಕ ಸ್ಟ್ಯಾಂಪುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

''1995ರ ಕರ್ನಾಟಕ ಸ್ಟ್ಯಾಂಪುಗಳ(ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿಯನ್ನು ನೀಡಲಾಯಿತು

ಶ್ರೀ ಆರ್.ಎಲ್.ಜಾಲಪ್ಪ (ಕಂದಾಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1995ರ ಕರ್ನಾಟಕ ಸ್ಟ್ಯಾಂಪುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿದೇಯಕವನ್ನು ಮಂಡಿಸಲಾಗಿದೆ. ಅನುಬಂಧ- II

3. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕ 1995 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್.ಜಿ ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1995ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾಪ ಏನೆಂದರೆ;

''1995ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿಯನ್ನು ನೀಡಲಾಯಿತು